ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಸಿಬ್ಬಂದಿ-2/ಇತರೆ/604/2010-11

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ, 18ನೇ ಅಡ್ಡ ರಸ್ತೆ,
ಬೆಂಗಳೂರು-560012.
ದಿನಾಂಕ:20-09-2013.

## ಸುತ್ತೋಲೆ

**ವಿಷಯ:**- ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ 2010 ಚುನಾವಣಾಧಿಕಾರಿ ಸಹಾಯಕ ಚುನಾವಣಾಧಿಕಾರಿ ಕರ್ತವ್ಯ ನಿರ್ವಹಿಸಿದ ಉಪನ್ಯಾಸಕರುಗಳಿಗೆ ಗಳಿಕೆ ರಜೆ ಸೌಲಭ್ಯ ಮಂಜೂರಾತಿ ಬಗ್ಗೆ.

**ಉಲ್ಲೇಖ:**- ಸರ್ಕಾರದ ಆದೇಶ ಸಂಖ್ಯೆ ಇಡಿ 131 ಡಿಜಿಡಿ 2013, ದಿನಾಂಕ:06-02-2013.

-*-

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ-2010ರಲ್ಲಿ ಚುನಾವಣಾಧಿಕಾರಿ/ಸಹಾಯಕ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದ ಉಪನ್ಯಾಸಕರುಗಳಿಗೆ ಗಳಿಕೆ ರಜೆ ಸೌಲಭ್ಯ ನೀಡುವಂತೆ ಕೋರಿದ್ದು, ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಉಲ್ಲೇಖ-1ರ ಪತ್ರದಲ್ಲಿ ಸೂಚಿಸಿರುತ್ತಾರೆ.

ಬೇಸಿಗೆ ರಜಾ ಅವಧಿಯಲ್ಲಿ ಗ್ರಾಮ ಪಂಚಾಯಿತಿ ಚುನಾವಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದ ಉಪನ್ಯಾಸಕರುಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 113(3)(ಎ) ಮತ್ತು (ಬಿ) ಪ್ರಕಾರ ಗಳಿಕೆ ರಜೆಯನ್ನು ಮಂಜೂರು ಮಾಡಿ ಸೇವಾ ಪುಸ್ತಕದಲ್ಲಿ ದಾಖಲಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

ಈ ರೀತಿ ಮಂಜೂರು ಮಾಡುವ ಗಳಿಕೆ ರಜೆಯನ್ನು ಕ್ಯಾಲೆಂಡರ್ ವರ್ಷದಲ್ಲಿ <u>ಗರಿಷ್ಠ 30 ದಿನಗಳಿಗೆ ಮೀರದಂತೆ</u> ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿ:**-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ಕಛೇರಿ ಪ್ರತಿ